# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.61(ಎಸ್.ಕೆ ಗಾರ್ಡನ್)
## ವಾರ್ಡ್ ಸಮಿತಿ ಸಭೆ, ದಿನಾಂಕ: 03-09-2022 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/ 10 / 22-23

ದಿನಾಂಕ: 03-09-2022 ರಂದು ಸಮಯ 11.00 ಗಂಟೆಗೆ ವಾರ್ಡ್ ನಂ. 61-ಎಸ್.ಕೆ ಗಾರ್ಡನ್ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು ರವರ ವಾರ್ಡ್ ಕಛೇರಿ ಐ.ಟಿ.ಐ ಲೇಔಟ್ ಎಸ್.ಕೆ ಗಾರ್ಡನ್ ವಾರ್ಡ್ ಸಂಖ್ಯೆ 61 ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | Atif Ahmed | Nodal Officer ward No. 61-S.K Garden & Asst. Executive Engineer, J.C. Nagar Sub-division |
| 2 | Rangappa B G | Asst. Engineer Ward No.61 |
| 3 | Venkatesh | Senior Health Inspector |
| 4 | Harish | JHI Ward No 61 |
| 5 | Srinivas | Senior Vetenary Inspector |
| 6 | Smt: M. Meena | Welfare Tailoring Teacher |
| 7 | Ragavendra N | Tax Inspector |
| 8 | Narasimhaiah | BWSSB |
| 9 | Manohar | JE Bescom |

ಶ್ರೀ ಅತೀಫ್ ಅಹಮ್ಮದ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ: 22-08-2022 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ವಾರ್ಡ್ ವ್ಯಾಪ್ತಿಯ ಮಸೀದ್ ಸ್ಟ್ರೀಟ್ ಬೀದಿಯ 1ನೇ ಮತ್ತು 2ನೇ ಅಡ್ಡರಸ್ತೆಗಳು ತುಂಬಾ ಹಾಳಾಗಿದ್ದು, ಸದರಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ತಿಳಿಸಿರುತ್ತಾರೆ.
2. ಐ ಟಿ ಐ ಲೇಔಟ್‌ನಲ್ಲಿರುವ ಪಾರ್ಕಿನಲ್ಲಿ ಮರಗಳ ರಂಬೆಗಳನ್ನು ಟ್ರೀಮ್ ಮಾಡಲು ಸಂಬಂಧಪಟ್ಟ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.
3. ರಸ್ತೆಗುಂಡಿಗಳು ಮುಚ್ಚಿರುವ ಬಗ್ಗೆ ಮಾಹಿತಿ ನೀಡಿರುತ್ತಾರೆ.
4. ಗಾಂದಿಗ್ರಾಮದ ವ್ಯಾಪ್ತಿಯಲ್ಲಿ ಸಿಸಿಟಿವಿಗಳನ್ನು ಅಳವಡಿಸಲು ಅಲ್ಲಿನ ಸ್ಥಳೀಯರು ವಾರ್ಡ್ ಸಭೆಯಲ್ಲಿ ಮನವಿ ಮಾಡಿದ್ದು, ನಗರೋದ್ಧನ ಅನುದಾನದಲ್ಲಿ ಸದರಿ ಕಾಮಗಾರಿಯನ್ನು ಕೈಗೊಳ್ಳಲು ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.
5. ಗಾಂಧಿಗ್ರಾಮದ ವ್ಯಾಪ್ತಿಯಲ್ಲಿ ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.

Scanned with CamScanner

6. ಬಿ.ಬಿ.ಎಂ.ಪಿ ಚುನಾವಣೆ ಸಮೀಪಿಸುತ್ತಿರುವುದ್ದರಿಂದ ವಾರ್ಡ್ ವ್ಯಾಪ್ತಿಯಲ್ಲಿನ ಸಾರ್ವಜನಿಕರಿಗೆ ಮತದಾರರ ಗುರುತಿನ ಚೀಟಿಗಳನ್ನು ತುರ್ತಾಗಿ ವಿತರಣೆ ಮಾಡಲು ಸಂಬಂಧಪಟ್ಟ ಕಂದಾಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿಲಾಗಿರುತ್ತದೆ.
7. ಗಾಂಧಿಗ್ರಾಮದ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸಮರ್ಪಕವಾಗಿ ಬರುತ್ತಿಲ್ಲವೆಂದು ಸ್ಥಳೀಯ ಸಾರ್ವಜನಿಕರು ವಾರ್ಡ್ ಸಭೆಯಲ್ಲಿ ದೂರು ನೀಡಿದ್ದು, ಸಂಬಂಧಪಟ್ಟ BWSSB ಅಧಿಕಾರಿಗಳಿಗೆ ಕೂಡಲೇ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಲಾಯಿತು.
8. ಗಾಂಧಿಗ್ರಾಮದ ವ್ಯಾಪ್ತಿಯಲ್ಲಿರುವ ಶಿಶುವಿಹಾರ ಕೇಂದ್ರದ ಕಟ್ಟಡದ ಮೊದಲನೇ ಮಹಡಿಯನ್ನು ನಿರ್ಮಿಸಿ ಅದರಲ್ಲಿ ಸ್ಥಳೀಯರಿಗೆ ಹೊಲಿಗೆ ತರಭೇತಿ ಕೇಂದ್ರ ಮತ್ತು ಗಣಕಯಂತ್ರ ತರಭೇತಿ ಹಾಗೂ ಜೀಮ್ ಕ್ಲಾಸ್ ಅನ್ನು ವ್ಯ ವಸ್ಥೆ ಮಾಡಲು ಮನವಿ ಮಾಡಿರುತ್ತಾರೆ. ಅದರಂತೆ ಸದರಿ ಕಟ್ಟಡವನ್ನು ಪರಿಶೀಲಿಸಿ ಮುಂದಿನ ಕ್ರಮಕೈಗೊಳ್ಳಲು ಚರ್ಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಅತೀಫ್ ಅಹಮ್ಮದ್)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 61

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.

06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
07. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಕಛೇರಿ ಕಡತಕ್ಕೆ.

Scanned with CamScanner